ದಿನಾಂಕ ಃ 14-06-2019 ಓ ಎಸ್ ನಂ. 90/2017

ಪಿ. ಡಬ್ಲ್ಯೂ - 1

<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಖ್ಯ ವಿಚಾರಣೆ ಃ ವಾದಿ ಪರ ವಕೀಲರಿಂದ</u>

ಈ ದಿನ ನಾನು ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳ ಬಗ್ಗೆ ಮಾಹಿತಿ ಇರುತ್ತದೆ. ಸಾಕ್ಷಿ ಪ್ರಮಾಣ ಪತ್ರವನ್ನು ನಾನೇ ಹೇಳಿ ಬರೆಸಿದ್ದು ಅದನ್ನು ನಾನು ಓದಿ ತಿಳಿದುಕೊಂಡ ನಂತರ ಅದಕ್ಕೆ ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ.

ದಾವಾದ ಆಸ್ತಿಗೆ ಸಂಬಂಧಿಸಿದ ಒಂದು ಪತ್ರಿಕೆ ಹಾಜರು ಮಾಡಿದ್ದೇನೆ, ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಎಂ.ಆರ್.ನಂ. ಎಚ್8 ರ ದೃಢೀಕೃತ ನಕಲು ಹಾಜರು ಮಾಡಿದ್ದೇನೆ, ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಹಕ್ಕು ದಾಖಲೆ ನಂ. 1982 ರ ದೃಢೀಕೃತ ನಕಲು ಹಾಜರು ಮಾಡಿದ್ದೇನೆ, ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ನಮ್ಮ ತಂದೆಯ ಮರಣ ದಾಖಲೆಯ ದೃಢೀಕೃತ ನಕಲು ಹಾಜರು ಮಾಡಿದ್ದೇನೆ, ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡುವ ಯಾವುದೇ ಸಕಾರಣಗಳು ಇರದೇ ಇರುವುದರಿಂದ ವಾದಿ ಪರ ವಕೀಲರ ಕೋರಿಕೆಯನ್ನು ತಿರಸ್ಕರಿಸಿ ಮುಂದುವರೆದ ಮುಖ್ಯ ವಿಚಾರಣೆಯನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ನಾನು ನನ್ನ ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

<u>ಪಾಟೀ ಸವಾಲು ಃ ಪ್ರತಿವಾದಿ ಪರ ವಕೀಲರಿಂದ</u>

ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ಮಾಡಲು ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದದಲ್ಲಿ ನನ್ನ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಹೆ ಪ್ರ ದ ನ್ಯಾ ದಂ ನ್ಯಾ ಬೈಲಹೊಂಗಲ